MVC.No.247/2022

PW-1

<u>ದಿನಾಂಕ 05-03-2025 ಸಾಕ್ಷಿದಾರರಿಗೆ ಪ್ರಮಾಣ ವಚನ ಮಾಡಿಸಲಾಯಿತು.</u>

**<u>ಪಾಟೀ ಸವಾಲುಃ 4 ನೇ ಎದುರುದಾರರ ಪರ ವಕೀಲರಿಂದಃ-</u>**

ಅಪಘಾತವಾದ ಸಮಯದಲ್ಲಿ ನಾನು ಕೆಎ.06.ಹೆಚ್.ಎಲ್1584 ವಾಹನದ ಮೇಲೆ ಪ್ರಯಾಣ ಮಾಡುತ್ತಿದ್ದೆ. ಸದರಿ ವಾಹನವನ್ನು ನನ್ನ ಸ್ನೇಹಿತ ನವನೀತನು ಚಾಲನೆ ಮಾಡುತ್ತಿದ್ದನು. ಆ ಸಮಯದಲ್ಲಿ ನಮ್ಮ ಇನ್ನೊಬ್ಬ ಸ್ನೇಹಿತ ದತ್ತಾತ್ರೇಯ ಕೂಡ ಬೈಕ್ ಮೇಲೆ ಕುಳಿತುಕೊಂಡಿದ್ದ ಎಂದರೆ ಸರಿ. ನಾವು ಒಟ್ಟು ಮೂರು ಜನರು ಸೇರಿ ಬೈಕಿನ ಮೇಲೆ ಪ್ರಯಾಣಿಸುತ್ತಿದ್ದೆವು ಎಂದರೆ ಸರಿ. ನಾವು ತುಮಾಕೂರಿನಿಂದ ಸಮತಳ ಗ್ರಾಮಕ್ಕೆ ಬರುತ್ತಿದ್ದೆವು. ನಿಟ್ಟೂರಿನಿಂದ ಕೆ.ಬಿ. ಕ್ರಾಸ್ಗೆ ಹೋಗುವ ರಸ್ತೆಯಲ್ಲಿ ಅಪಘಾತವಾಗಿದೆ ಎಂದರೆ ಸರಿ. ಸದರಿ ರಸ್ತೆಯು ರಾಷ್ಟ್ರೀಯ ಹೆದ್ದಾರಿ ಎಂದರೆ ಸರಿ. ನವನೀತನು ನಮ್ಮ ವಾಹನವನ್ನು ರಸ್ತೆಯ ಎಡಭಾಗದಲ್ಲಿ ಚಾಲನೆ ಮಾಡುತ್ತಿದ್ದನು ಎಂದರೆ ಸರಿ. ನಾವು ಪ್ರಯಾಣ ಮಾಡುತ್ತಿದ್ದ ಬೈಕಿಗೆ ಮಾರುತಿ ಇಕೋ ಕಾರು ಅಪಘಾತಪಡಿಸಿದೆ ಎಂದರೆ ಸರಿ. ಸದರಿ ಕಾರು ನಮ್ಮ ಎದುರುಗಡೆಯಿಂದ ಬರುತ್ತಿತ್ತು. ಈ ಅಪಘಾತವು ಕಾರು ಚಾಲಕನ ತಪ್ಪಿನಿಂದ ಆಗಿದೆ ಎಂದರೆ ಸರಿ.

ಅಪಘಾತದಲ್ಲಿ ನನಗೆ ತಲೆಗೆ ಪೆಟ್ಟಾಗಿತ್ತು ಮತ್ತು ನಾನು ಪ್ರಜ್ಞಾಹೀನನಾಗಿದ್ದೆ. ನವನೀತನಿಗೆ ಕೂಡ ತುಂಬಾ ಗಾಯಗಳಾಗಿದ್ದವು, ಆತನು ಆಸ್ಪತ್ರೆಯಲ್ಲಿ ಮೃತಪಟ್ಟಿರುತ್ತಾನೆ. ದತ್ತಾತ್ರೇಯನಿಗೆ ಬೆನ್ನಿಗೆ ಪೆಟ್ಟುಗಳು ಆಗಿದ್ದವು. ನಮ್ಮಗಳ ಪೈಕಿ ಸದರಿ ಅಪಘಾತವಾದ ಬಗ್ಗೆ ಪೋಲೀಸರಿಗೆ ಯಾವುದೇ ದೂರನ್ನು ಕೊಟ್ಟಿಲ್ಲ. ಈ ಕುರಿತು ಕಾರಿನ ಪ್ರಯಾಣಿಕರು ದೂರು ಕೊಟ್ಟಿದ್ದಾರೆ ಎಂದರೆ ಸರಿ. ನವನೀತನ ಯಾವುದೇ ತಪ್ಪು ಇರದಿದ್ದರೂ ಸಹ ಅವರ ಮೇಲೆ ಸುಳ್ಳು ಪ್ರಕರಣ ದಾಖಲು ಮಾಡಿದ್ದರು ಎಂದರೆ ಸರಿ. ಈ ಅಪಘಾತವು 1 ನೇ ಎದುರುದಾರರ ತಪ್ಪಿನಿಂದ ಆಗಿರುವ ಕಾರಣ 4 ನೇ ಎದುರುದಾರರು ಯಾವುದೇ ಪರಿಹಾರ ಕೊಡಲು ಬಾದ್ಯಸ್ಥರು ಇರುವುದಿಲ್ಲ ಎಂದರೆ ಸರಿ. ಪರಿಹಾರವನ್ನು 3 ನೇ ಎದುರುದಾರರು ಕೊಡಬೇಕಾಗುತ್ತದೆ ಎಂದರೆ ಸರಿ.

ನಾನು ಸಿದ್ಧಗಂಗಾ ಆಸ್ಪತ್ರೆಯಲ್ಲಿ ಒಂದು ತಿಂಗಳು ಒಳರೋಗಿಯಾಗಿ ಚಿಕಿತ್ಸೆ ಪಡೆದುಕೊಂಡಿದ್ದೇನೆ. ಈ ರೀತಿ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಕೇವಲ 11 ದಿನಗಳು ಮಾತ್ರ ಒಳರೋಗಿಯಾಗಿ ಚಿಕಿತ್ಸೆ ಪಡೆದುಕೊಂಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರಿದು ತಲೆಯಲ್ಲಿ ರಕ್ತ ಹೆಪ್ಪುಗಟ್ಟಿದ್ದ ಕಾರಣ ಮತ್ತೆ ನಾನು ಆಸ್ಪತ್ರೆಗೆ ದಾಖಲಾಗಿದ್ದೆ ಎಂದು ನುಡಿಯುತ್ತಾರೆ. ಆ ಬಗ್ಗೆ ಯಾವುದೇ ದಾಖಲೆಗಳನ್ನು ಹಾಜರಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ದಿಃ30.04.2022 ರಂದು ನಾನು ಆಸ್ಪತ್ರೆಯಿಂದ ಬಿಡುಗಡೆ ಹೊಂದಿದಾಗ ನನ್ನ ಸಂಪೂರ್ಣ ಗಾಯಗಳು ವಾಸಿಯಾಗಿದ್ದವು ಎಂದರೆ ಸರಿಯಲ್ಲ. ನಾನು ಆಸ್ಪತ್ರೆಯಿಂದ ಬಿಡುಗಡೆಗೊಂಡ ನಂತರ ಮತ್ತೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿಲ್ಲ ಎಂದರೆ ಸರಿಯಲ್ಲ. ನಾನು ಮೊದಲಿನಂತೆಯೇ ಈಗ ಚನ್ನಾಗಿದ್ದೇನೆ ಎಂದರೆ ಸರಿಯಲ್ಲ. ನಾನು ಮುಂದುವರಿದ ಚಿಕಿತ್ಸೆ ಪಡೆದುಕೊಳ್ಳುತ್ತಿರುವ ಬಗ್ಗೆ ಯಾವುದೇ ಸೂಕ್ತ ದಾಖಲೆಗಳನ್ನು ನೀಡಿಲ್ಲ ಎಂದರೆ ಸರಿಯಲ್ಲ.

ನಾನು ಹಾಜರುಪಡಿಸಿರುವ ವೈದ್ಯಕೀಯ ಬಿಲ್ಲುಗಳಲ್ಲಿ ರೂ**.1,75,000/-**ಗಳು ಮುಂಗಡ ಪಾವತಿ ಹಣವನ್ನೂ ಕೂಡ ಸೇರಿಸಿದ್ದೇವೆ ಎಂದರೆ ನನಗೆ ಗೊತ್ತಿಲ್ಲ. ನಿಪಿ-21 ರ ವೈದ್ಯಕೀಯ ಬಿಲ್ಲುಗಳನ್ನು ಈ ಪ್ರಕರಣಕ್ಕಾಗಿ ಸೃಷ್ಟಿಸಲಾಗಿದೆ ಎಂದರೆ ಸರಿಯಲ್ಲ. ಇನ್ನೂ ನನ್ನ ಎಂ.ಬಿ.ಎ. ವಿದ್ಯಾಭ್ಯಾಸ

ಪೂರ್ಣಗೊಂಡಿರುವುದಿಲ್ಲ. ನನಗೆ ತಲೆಗೆ ಗಾಯಗಳಾಗಿದ್ದ ಕಾರಣ ವೈದ್ಯಕೀಯ ಕಾರಣದಿಂದ ನನ್ನನ್ನು ಕಾಲೇಜಿನಿಂದ ವಿಶ್ರಾಂತಿ ಪಡೆದುಕೊಳ್ಳಲು ಬಿಡುಗಡೆ ಮಾಡಿದ್ದಾರೆ. ಸದರಿ ವಿಚಾರದ ಬಗ್ಗೆ ನಾನು ಯಾವುದೇ ದಾಖಲೆ ನೀಡಿಲ್ಲ ಎಂದರೆ ಸರಿಯಲ್ಲ. ನನ್ನ ವಿದ್ಯಾಭ್ಯಾಸಕ್ಕೆ ಸಂಬಂಧಿಸಿದ ಯಾವುದೇ ದಾಖಲೆಗಳನ್ನು ನಾನು ಮಾನ್ಯ ನ್ಯಾಯಾಲಯಕ್ಕೆ ನೀಡಿಲ್ಲ ಎಂದರೆ ಸರಿಯಲ್ಲ. ನನಗೆ ತಿಂಗಳಿಗೆ ರೂ.40,000/- ಆದಾಯ ಇದೆ ಎಂದು ತೋರಿಸಲು ದಾಖಲೆ ನೀಡಿಲ್ಲ ಎಂದರೆ ಸರಿ. ಯಾವುದೇ ಆದಾಯ ಇರದೇ ಇದ್ದರೂ ಕೂಡ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ನನ್ನ ವಯಸ್ಸಿನ ದೃಢೀಕರಣ ಪತ್ರವನ್ನು ಕೂಡ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನವನೀತನಿಗೆ ಚಾಲನಾ ಪರವಾನಗಿ ಕೂಡ ಇರಲಿಲ್ಲ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರವನ್ನು ಪಡೆದುಕೊಳ್ಳಲು ಸುಳ್ಳು ದಾಖಲೆಗಳ ಆಧಾರದ ಮೇಲೆ ಸುಳ್ಳು ಪ್ರಕರಣವನ್ನು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ನನಗೆ ಯಾವುದೇ ತರಹದ ಶಾಶ್ವತ ಅಂಗನ್ಯೂನ್ಯತೆಗಳು ಇರುವುದಿಲ್ಲ ಎಂದರೆ ಸರಿಯಲ್ಲ.

ಅಪಘಾತವಾದ ನಂತರ ನವನೀತನನ್ನು ಸಿದ್ಧಗಂಗಾ ಆಸ್ಪತ್ರೆಗೆ ದಾಖಲಿಸಿದ್ದರು ಎಂದರೆ, ನನಗೆ ಸರಿಯಾಗಿ ಗೊತ್ತಿಲ್ಲ. ಆ ಸಂದರ್ಭದಲ್ಲಿ ನಾವುಗಳೆಲ್ಲರೂ ಮದ್ಯಪಾನ ಮಾಡಿ ಬೈಕ್ ಮೇಲೆ ಪ್ರಯಾಣಿಸುತ್ತಿದ್ದ ಬಗ್ಗೆ ನಮೂದು ಮಾಡಿದ್ದಾರೆ ಎಂದರೆ ಸರಿಯಲ್ಲ. ಅಪಘಾತವಾದ ಸಮಯದಲ್ಲಿ ನಾವು ಮೂರು ಜನ ಬೈಕಿನ ಮೇಲೆ ಪ್ರಯಾಣ ಮಾಡಿ ವಿಮಾ ಒಪ್ಪಂದವನ್ನು ಉಲ್ಲಂಘಿಸಿದ್ದೇವೆ ಎಂದರೆ ಸರಿಯಲ್ಲ. ಆ ಕಾರಣಕ್ಕೆ 4 ನೇ ಎದುರುದಾರರು ಯಾವುದೇ ವಿಮಾ ಪರಿಹಾರವನ್ನು ಕೊಡಲು ಬಾದ್ಯಸ್ಥರಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೇ ಸ ಇ ಎ ಒ

ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ಪ್ರ.ದ.ನ್ಯಾದಂ. ರವರು ತರೀಕೆರೆ.